354 ಶ್ರೀಮತಿ ಮಲ್ಲಿಕಾ ಪ್ರಸಾದ್ : ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜ್ಞಾನಪೀಠ ಪ್ರಶಸ್ತಿ ವಿಜೇತ ಡಾ: ಶಿವರಾಮ ಕಾರಂತರ ಬಾಲವನ ಪುತ್ತೂರು ಇದನ್ನು ಪ್ರವಾಸೋದ್ಯಮ ಕೇಂದ್ರವಾಗಿ ಬೆಳೆಸುವ ವಿಚಾರ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಹಾಗಿಲ್ಲದಿದ್ದಲ್ಲಿ, ಯಾವಾಗ ಕ್ರಮ ಕೈಗೊಳ್ಳಲಾಗುವುದು;

ಈ) 2008–09ನೇ ಸಾಲಿನಲ್ಲಿ ಬಾಲವನ ಅಭಿವೃದ್ಧಿಗೆ ಸರ್ಕಾರ ಬಿಡುಗಡೆ ಮಾಡಿದ ಅನುದಾನವೆಷ್ಟು;

ಉ) ಹೆಚ್ಚಿನ ಅನುದಾನ ಬಿಡುಗಡೆ ಮಾಡಿ ಬಾಲವನ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಜಿ.ಜನಾರ್ಧನ ರೆಡ್ಡಿ (ಪ್ರವಾಸೋದ್ಯಮ ಮತ್ತು ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಸಚಿವರು) :

ಅ) ಪ್ರಸ್ತುತ ಇಲಾಖೆಯ ಮುಂದೆ ಈ ಯೋಜನೆ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಬಾಲವನವು ಈ ಇಲಾಖೆಯ ವ್ಯಾಪ್ತಿಯಲ್ಲಿ ಬರದೆ ಇರುವುದರಿಂದ ಈ ವಿಚಾರವು ಪ್ರವಾಸೋದ್ಯಮ ಇಲಾಖೆಯ ಮುಂದೆ ಇರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

484 ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ಅಬಕಾರಿ, ವಾರ್ತೆ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಬೆಂಗಳೂರು ಜಲ ಮಂಡಳಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರತಿ ತಾಲ್ಲೂಕಿಗೂ ಇಂತಿಷ್ಟೇ ಮದ್ಯ ಮಾರಾಟವನ್ನು ಮಾಡಬೇಕೆಂದು ಅಬಕಾರಿ ಇಲಾಖೆಗೆ ಸರ್ಕಾರ ಆದೇಶಿಸಿದೆಯೇ;